ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ರಾಜ್ಯದ ಅಕ್ರಮ ಮರಳುಗಣಿಗಾರಿಕೆ ಕುರಿತು

ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನಸಭೆಯಿಂದ ಚುನಾಯಿತರಾದವರು) -

702 (821) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಅಕ್ರಮ ಮರಳು ಗಣಿಗಾರಿಕೆ ಮತ್ತು ಅಕ್ರಮ ಮರಳು ಸಾಗಾಣಿಕೆ ರಾಜಾರೋಷವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅದನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಮರಳು ಗಣಿಗಾರಿಕೆ ವಿಷಯದಲ್ಲಿ ಸರ್ಕಾರದ ನಿಯಮಾವಳಿಗಳು ಅನುಷ್ಠಾನಗೊಂಡಿವೆಯೇ; (ವಿವರ ನೀಡುವುದು)

(ಇ) ಅಕ್ರಮ ಮರಳು ಗಣಿಗಾರಿಕೆ ತಡೆಯುವ ನಿಷ್ಠಾವಂತ ಅಧಿಕಾರಿಗಳ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಸರ್ಕಾರಿ ಅಧಿಕಾರಿಗಳ ಮೇಲೆ ಹಲ್ಲೆ ಮಾಡಿದವರ ವಿರುದ್ಧ ಸರ್ಕಾರ ಜರುಗಿಸಿದ ಕಾನೂನು ಕ್ರಮಗಳೇನು? (ವಿವರ ನೀಡುವುದು)